ಮೊದಲನೇ ಪುಟದಿಂದ

ವಿಶೇಷ ಸಂಪುಟ ಸಭೆ ಮಂಗಳವಾರಕ್ಕೆ

ಎಕೆಎಡಿ ಎಂದು ಬರೆಸಿದ ಬಹುತೇಕರು ಬಲಗೈ ಸಮುದಾಯಕ್ಕೆ ಸೇರಿದವರಾಗಿದ್ದು ಆ ಸಮುದಾಯವನ್ನು ಬಲಗೈ ಗುಂಪಿಗೆ ಸೇರಿಸಿ ಆ ಮೀಸಲಾತಿಯನ್ನು ತಮಗೆ ವರ್ಗಾಯಿಸುವಂತೆ ಒತ್ತಾಯಿಸಿದ್ದಾರೆ.

ಈ ಮಧ್ಯೆ ಬೋವಿ ಮತ್ತು ಲಂಬಾಣಿ ಜನಾಂಗದವರು ಸಹ ನಾಗಮೋಹನ್ ದಾಸ್ ವರದಿಯನ್ನು ಯಥಾವತ್ತಾಗಿ ಒಪ್ಪಿಕೊಳ್ಳುವುದು ಬೇಡ. ಇದರಲ್ಲಿ ಕೆಲವು ಲೋಪದೋಷಗಳು ಇದ್ದು ಅದನ್ನು ಸರಿಪಡಿಸಿದ ಬಳಿಕವೇ ಜಾರಿ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬೋವಿ ಗುರು ಪೀಠದ ಇಮ್ಮಡಿ ಸಿದ್ದರಾಮಯಸ್ವಾಮಿ ನೇತೃತ್ವದ ನಿಯೋಗ ಒತ್ತಾಯ ಮಾಡಿದೆ.

ಈ ಎಲ್ಲ ಗೊಂದಲಗಳ ಮಧ್ಯೆ ನಾಳೆ ಈ ವಿಷಯಕ್ಕೆ ಸಂಬಂಧಪಟ್ಟಂತೆ ನಡೆಯಬೇಕಿದ್ದ ವಿಶೇಷ ಸಚಿವ ಸಂಪುಟ ಸಭೆಯನ್ನು ಆ.19 ಮಂಗಳವಾರಕ್ಕೆ ಮುಂದೂಡಲಾಗಿದೆ.

ಇತ್ತ ವಿಧಾನ ಪರಿಷತ್‌ನಲ್ಲಿ ಪ್ರತಿ ಪಕ್ಷ ಬಿಜೆಪಿ ಈ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳುವಂತೆ ಪಟ್ಟು ಹಿಡಿದಿದ್ದು ನಿಯಮ 68ರ ಪ್ರಕಾರ ಚರ್ಚೆಗೆ ಅವಕಾಶ ನೀಡುವುದಾಗಿ ಸಭಾಪತಿಗಳು ಭರವಸೆ ನೀಡಿದ್ದು ಬಹುತೇಕ ನಾಳೆ ಅಥವಾ ನಾಡಿದ್ದು ಈ ವಿಷಯ ಚರ್ಚೆಗೆ ಬರುವ ಸಾಧ್ಯತೆ ಇದೆ.

ಈ ಎಲ್ಲ ಬೆಳವಣಿಗೆಗಳ ಮಧ್ಯೆ ಆಗಸ್ಟ್ 19ರಂದು ನಡೆಯುವ ಸಂಪುಟ ಸಭೆ ಮಹತ್ವ ಪಡೆದುಕೊಂಡಿದೆ.

ಭಾರತದ ಸ್ವಾತಂತ್ರ ಪ್ರಪಂಚಕ್ಕೆ ಮಾದರಿ

ಸಾರ್ವತ್ರಿಕವಾಗಿರುವ ದೊಡ್ಡ ರಾಷ್ಟ್ರೀಯ ಹಬ್ಬಗಳಾಗಿವೆ ಎಂದರು.

ಬೇರೆ ದೇಶಗಳು ರಕ್ತಕ್ರಾಂತಿಯ ಮೂಲಕ ಸ್ವಾತಂತ್ರ ಪಡೆದರೆ ಭಾರತ ಮಾತ್ರ ಸತ್ಯ ಅಹಿಂಸೆ ಹಾಗೂ ತ್ಯಾಗದ ಮೂಲಕ ಬ್ರಿಟೀಷರ ದಾಸ್ಯದಿಂದ ಮಹಾತ್ಮಗಾಂಧೀಜಿ ಸೇರಿದಂತೆ ಅನೇಕ ಮಹನೀಯರ ದೂರದೃಷ್ಟಿ ಫಲವಾಗಿ ನಮಗೆ ಸ್ವಾತಂತ್ರ್ಯ ಸಿಕ್ಕಿದೆ ಎಂದರು.

ಒಗ್ಗೂಡಿಸಿದ ಸಂವಿಧಾನ : ಅವರ ಇಚ್ಛೆಯಂತೆ, ಅವರ ಅಭಿಲಾಷೆಯಂತೆ ಈ ದೇಶದ ಆಡಳಿತ ನಡೆಯಬೇಕು ಎನ್ನುವ ಆಶಯದಡಿ ಯೋಚಿಸಿ, ಯೋಜಿಸಿದ ಎಲ್ಲ ಹೋರಾಟಗಾರರು ಡಾ.ಬಿ.ಆರ್.ಅಂಬೇಡ್ಕರ ಅವರಿಗೆ ಸಂವಿಧಾನ ರಚನೆಯ ಜವಾಬ್ದಾರಿ ನೀಡಿದರು. ಈ ದೇಶದ ಎಲ್ಲ ಜನರ, ಧರ್ಮೀಯರ, ಸಂಸ್ಕೃತಿಗಳ ಬಗ್ಗೆ ಅರಿತು ಎಲ್ಲರಿಗೂ ಅನುಕೂಲವಾಗುವ ಹಾಗೆ ಸಂವಿಧಾನ ರಚಿಸಿದ್ದರಿಂದಾಗಿ ಇಂದು ಎಲ್ಲರೂ ಸೇರಿ ಒಗ್ಗೂಡಿ ಬಾಳುವಂತಾಗಿದೆ. ಎಲ್ಲರಿಗೂ ಸಮಾನ ಅವಕಾಶಗಳು ಸಿಗುವಂತಾಗಿದೆ ಎಂದು ಅಭಿಪ್ರಾಯ ಪಟ್ಟರು.

ನಮ್ಮ ದೇಶದ ಭವ್ಯ ಇತಿಹಾಸದ ಹಿನ್ನೆಲೆಯಲ್ಲಿ ನಾವು ಭವಿಷ್ಯದ ಭಾರತ ಕಟ್ಟಬೇಕಿದೆ. ಅದಕ್ಕಾಗಿ ನಾಡಿನಲ್ಲಿ ಶಾಂತಿ ನೆಲೆಸಬೇಕು. ಇದು ಕೇವಲ ಸರ್ಕಾರದ ಕೆಲಸ ಎಂದು ಭಾವಿಸದೆ ಎಲ್ಲರದ್ದು ಎಂಬ ವಾತಾವರಣ ಸೃಷ್ಟಿಯಾಬೇಕು. ಎಲ್ಲರೂ ಒಗ್ಗೂಡಿ ಬಾಳಬೇಕು ಎಂದು ಆಲೋಚಿಸಿದ ಪರಿಣಾಮ ಎಲ್ಲರಿಗೂ ಸಂವಿಧಾನ ಬದ್ಧವಾಗಿ ಅಭಿವ್ಯಕ್ತಿಯ ಹಕ್ಕು, ಜೀವಿಸುವ, ಧಾರ್ಮಿಕ ಸೇರಿದಂತೆ ಅನೇಕ ಹಕ್ಕುಗಳನ್ನು ಅಂಬೇಡ್ಕರ್ ಅವರು ಕಲ್ಪಿಸಿದರು.

ಮಾತು ಸಾಕು ಕೃತಿಯಲ್ಲಿರಲಿ : ನಾವೆಲ್ಲರೂ ಈ ಸಮಾಜಮುಖಿ ಹಕ್ಕು ಮತ್ತು ನಮ್ಮ ಕರ್ತವ್ಯ ಅರಿತು ಈ ದೇಶ ಕಟ್ಟಬೇಕಿದೆ. ಪ್ರತಿಯೊಬ್ಬ ಈ ದೇಶದ ಸಂವಿಧಾನದ ಆಶಯ ಅರಿತು ಅದಕ್ಕೆ ಬದ್ಧರಾಗಿ ನಡೆದು ಜನಪ್ರತಿನಿಧಿಗಳಾದವರು, ಸಾಮಾನ್ಯ ಜನರು, ಅಧಿಕಾರಿಗಳು ನಮ್ಮ ನಡವಳಿಕೆ ಸರಿಪಡಿಸಿಕೊಳ್ಳಬೇಕು ಇದನ್ನು ಕೇವಲ ಮಾತಿನಲ್ಲಿ ಹೇಳದೆ ಕೃತಿ ಮೂಲಕ ನಡೆದುಕೊಂಡರೆ ಭಾರತವನ್ನು ಸುಂದರವಾಗಿ ಕಟ್ಟಬಹುದಾಗಿದೆ ಎಂದರು.

371ಜೆ ನಿಂದ ಕ್ರಾಂತಿ : ಬಸವಾದಿ ಶರಣರು ಒಗ್ಗೂಡಿ ನಡೆಸಿದ ಕಲ್ಯಾಣ ಕ್ರಾಂತಿಯಿಂದಾಗಿ ರಾಯಚೂರ ಒಳಗೊಂಡ ಈ ಕಲ್ಯಾಣ ಭಾಗಕ್ಕೆ ತನ್ನದೇ ಮಹತ್ವ ಇದೆ. 'ವಚನ ಸಾಹಿತ್ಯ ಮತ್ತು ದಾಸ ಸಾಹಿತ್ಯವು ನಮಗೆ ಎರಡು ಕಣ್ಣುಗಳಿದ್ದಂತೆ. ಈ ಭಾಗದ ಹಿರಿಯ ರಾಜಕೀಯ ಮುತ್ಸದ್ದಿ ಮಲ್ಲಿಕಾರ್ಜುನ ಖರ್ಗೆ, ಯುಪಿಎ ಸರ್ಕಾರದ ಪರಿಶ್ರಮದಿಂದಾಗಿ ಈ ಭಾಗಕ್ಕೆ 371ಜೆ ಸಂವಿಧಾನ ಮೀಸಲು ಲಭಿಸಿದ್ದು ಕಳೆದ 10 ವರ್ಷಗಳಲ್ಲಿ 9 ಸಾವಿರ ವಿದ್ಯಾರ್ಥಿಗಳು ವೈದ್ಯರಾಗುತ್ತಿದ್ದಾರೆ, 80 ಸಾವಿರ ವಿವಿಧ ಹುದ್ದೆಗಳು ಲಭಿಸಿವೆ ಸುಮಾರು 20 ಸಾವಿರ ಕೋಟಿ ರೂ ಅಭಿವೃದ್ಧಿಗಾಗಿ ಅನುದಾನ ಬಂದಿದೆ.

ಅಭಿವೃದ್ಧಿಗೆ ಹರಿದು ಬಂದ ಅನುದಾನ : ಕಾಂಗ್ರೆಸ್‌ನ ಸಿದ್ದರಾಮಯ್ಯ ನೇತೃತ್ವದಲ್ಲಿ ರಾಜ್ಯ ಸರ್ಕಾರ ರಾಯಚೂರ ಜಿಲ್ಲೆಯ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ 50 ಕೋಟಿ ರೂ. ವೆಚ್ಚದಲ್ಲಿ ಸಾಂಪ್ರದಾಯಿಕ ಸಭಾಂಗಣಕ್ಕೆ ಟೆಂಡರ ಕರೆಯಲಾಗಿದೆ. 50 ಕೋಟಿ ರೂ ವೆಚ್ಚದಲ್ಲಿ ಕ್ಯಾನ್ಸರ್ ಆಸ್ಪತ್ರೆ 10 ಕೋ ವೆಚ್ಚದಲ್ಲಿ ಟ್ರಾಮಾ ಸೆಂಟರ್ ನಿರ್ಮಾಣ ಮಾಡಲಾಗುತ್ತಿದೆ.

ಏರ್‌ಪೋರ್ಟ್, ಏಮ್ಸ್ ಕನಸು : ಇಲ್ಲಿನ ಜನರ ಬಹುದೊಡ್ಡ ಎರಡು ಕನಸುಗಳಿದ್ದು ವಿಮಾನ ನಿಲ್ದಾಣ ಮತ್ತು ಇಲ್ಲಿ ಏಮ್ಸ್ ಸ್ಥಾಪನೆಯಾಗಬೇಕು. ವಿಮಾನ ನಿಲ್ದಾಣ ಪ್ರಗತಿಯಲ್ಲಿದ್ದು ಜಿಲ್ಲೆಗೆ ರಾಜ್ಯ ಸರ್ಕಾರದ ಮೂಲಕ ಏಮ್ಸ್ ಸ್ಥಾಪಿಸಲು ಕೇಂದ್ರಕ್ಕೆ ಪ್ರಸ್ತಾವನೆ ಹೋಗಿದೆ ಮಂಜೂರು ಮಾಡುವ ವಿಶ್ವಾಸ ಇದೆ ಎಂದರು.

ಬದಲಾವಣೆ ಭಾವನೆ ಮೂಡಿಸಿ : ರಾಯಚೂರ ಜಿಲ್ಲೆಯ ಅಭಿವೃದ್ಧಿಗೆ ಜಿಲ್ಲೆಯಲ್ಲಿನ ಅಧಿಕಾರಿಗಳು ಮತ್ತು ಸಿಬ್ಬಂದಿಯು ಪಾರದರ್ಶಕವಾಗಿ ಕೆಲಸ ಮಾಡಬೇಕು. ಭ್ರಷ್ಟಾಚಾರ ಮುಕ್ತ ಆಡಳಿತ ಕೊಡಬೇಕು. ನಿಸ್ವಾರ್ಥ ಭಾವದಿಂದ ಕೆಲಸ ಮಾಡಬೇಕು. ನಾವು ಬದಲಾಗುತ್ತಿದ್ದೇವೆ ಎನ್ನುವ ಭಾವನೆ ಜಿಲ್ಲೆಯ ಜನರಲ್ಲಿ ಮೂಡುವಂತೆ ಎಲ್ಲರೂ ಸೇರಿ ಕೆಲಸ ಮಾಡಲು ಸಚಿವರು ಸಲಹೆ ನೀಡಿದರು.

ಮೈನವಿರೇಳಿಸಿದ ನೃತ್ಯ : ರಾಯಚೂರಿನ ವಿದ್ಯಾಭಾರತಿ ಶಾಲೆ ವಿದ್ಯಾರ್ಥಿಗಳು ಸ್ವಾತಂತ್ರ ಬಂದ ಬಗೆ ಹಾಗೂ ಜಾನ್‌ಮಿಲ್ಟನ್ ಶಾಲೆಯ ವಿದ್ಯಾರ್ಥಿಗಳು ಇತ್ತೀಚೆಗೆ ನಡೆದ ಪುಲ್ವಾಮಾ ದಾಳಿ, ಆಪರೇಶನ್ ಸಿಂಧೂರ ಕುರಿತ ಸನ್ನಿವೇಶಗಳ ನೃತ್ಯ ಪ್ರದರ್ಶಿಸಿ ಗಮನ ಸೆಳೆದರು.

ಸನ್ಮಾನ : ವಿವಿಧ ಇಲಾಖೆಯಲ್ಲಿ ಉತ್ತಮ ಸೇವೆ ಸಲ್ಲಿಸಿದ ಜಿಲ್ಲೆಯ ವಿವಿಧ ಅಧಿಕಾರಿಗಳಿಗೆ ಜಿಲ್ಲಾ ಸರ್ವೋತ್ತಮ ಅಧಿಕಾರಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಗೌರವ ವಂದನೆ : ರಾಯಚೂರಿನ ವಿವಿಧ ಸರ್ಕಾರಿ ಶಾಲೆ, ಕಾಲೇಜಿನ ಎನ್‌ಎಸ್‌ಎಸ್, ಎನ್‌ಸಿಸಿ, ಸ್ಕೌಟ್ ಗೈಡ್ಸ್ ತಂಡಗಳು, ಪೊಲೀಸ್, ಅಗ್ನಿಶಾಮಕ, ಗೃಹರಕ್ಷಕ ದಳ ಸೇರಿ 15 ವಿವಿಧ ಪದಾತಿ ತಂಡಗಳು ಸಚಿವರಿಗೆ ಗೌರವ ವಂದನೆ ಸಲ್ಲಿಸಿದ್ದು ಗಮನಾರ್ಹವಾಗಿತ್ತು .

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ಸಂಸದ ಜಿ.ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಎ.ವಸಂತಕುಮಾರ, ಮಹಾನಗರ ಪಾಲಿಕೆ ಮೇಯರ್ ನರಸಮ್ಮ ಮಾಡಗಿರಿ, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಗೌಡ, ಉಪಾಧ್ಯಕ್ಷ ಬಶೀರ್ ಅಹ್ಮದ್, ಆರ್‌ಡಿಎ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲೂಕಾಧ್ಯಕ್ಷ ಪವನ್ ಕಿಶೋರ ಪಾಟೀಲ, ಜಿಲ್ಲಾಧಿಕಾರಿ ನಿತೀಶ್ ಕೆ., ಜಿಲ್ಲಾ ಸಿಇಓ ಈಶ್ವರ ಕುಮಾರ ಕಾಂಡೂ, ಎಸ್‌ಪಿ ಎಂ.ಪುಟ್ಟಮಾದಯ್ಯ, ಆಯುಕ್ತ ಜುಬಿನ್ ಮೊಹಪಾತ್ರ, ಎಡಿಸಿ ಶಿವಾನಂದ, ಸಹಾಯಕ ಆಯುಕ್ತ ಗಜಾನನ ಬಾಳೆ, ರಾಯಚೂರು ತಹಶೀಲ್ದಾರ ಸುರೇಶ್ ವರ್ಮಾ, ಮುಖಂಡರಾದ ಕೆ.ಶಾಂತಪ್ಪ, ಜಯವಂತರಾವ್ ಪತಂಗೆ, ಡಾ.ರಝಾಕ್ ಉಸ್ತಾದ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಇಡಿ, ಸಿಬಿಐ ದುರ್ಬಳಕೆ ವಿರುದ್ಧ ದನಿ ಎತ್ತಿ

ಐಟಿ, ಇಡಿ, ಸಿಬಿಐ ಮುಂತಾದ ಸಾಂವಿಧಾನಿಕ ಸಂಸ್ಥೆಗಳು ಪ್ರಜಾಪ್ರಭುತ್ವದ ಹಾಗೂ ಸಂವಿಧಾನದ ನೈಜ ಮೌಲ್ಯಗಳ ಉಳಿವಿಗೆ ಕಾರ್ಯ ನಿರ್ವಹಿಸುತ್ತಿಲ್ಲ ಎಂಬ ಆಕ್ರೋಶ ವಿವಿಧ ವೇದಿಕೆಗಳಿಂದ ವ್ಯಕ್ತವಾಗುತ್ತಿದೆ. ಈ ಕುರಿತು ಜವಾಬ್ದಾರಿಯುತ ನಾಗರಿಕರೆಲ್ಲಾ ದನಿ ಎತ್ತಬೇಕಿದೆ ಎಂದು ಸಲಹೆ ಮಾಡಿದರು.

ಅಭಿವೃದ್ಧಿಯ ಉತ್ತುಂಗ ತಲುಪಿ ಸಮಾಜಕ್ಕೆ ಮರಳಿ ಕೊಡುಗೆ ನೀಡುವುದೇ ಅತ್ಯುನ್ನತ ಸ್ವಾತಂತ್ರ್ಯ. ಕರ್ನಾಟಕ ಈಗಾಗಲೇ ಭಾರತದ ಐಟಿ ರಾಜಧಾನಿಯಾಗಿದ್ದು ಈಗ ನಾವು ಜಗತ್ತಿನ ನಾವೀನ್ಯತಾ ರಾಜಧಾನಿಯಾಗುವತ್ತ ಹೆಜ್ಜೆ ಇಡುತ್ತಿದ್ದೇವೆ. ಕರ್ನಾಟಕ ಕ್ವಾಂಟಮ್ ಮಿಷನ್ ವಿಜ್ಞಾನದ ಭವಿಷ್ಯವನ್ನು ರೂಪಿಸಲಿದೆ. ನಾವು ಕೇವಲ ಉದ್ಯೋಗಗಳನ್ನು ಸೃಷ್ಟಿಸುತ್ತಿಲ್ಲ. ಜನರ ಜೀವನ ಬದಲಾಯಿಸುವಂತಹ ಆಲೋಚನೆಗಳು, ಆವಿಷ್ಕಾರಗಳು, ಹೊಸತನಗಳನ್ನು ಸೃಷ್ಟಿ ಸುತ್ತಿದ್ದು, ನಮ್ಮ ಆಲೋಚನೆಗಳು ಗಡಿಯಾಚೆಗೂ ತಲುಪಿವೆ ಎಂದರು.

ಕರ್ನಾಟಕವನ್ನು ಡ್ರಗ್ಸ್ ಮುಕ್ತ ರಾಜ್ಯವನ್ನಾಗಿ ಘೋಷಿಸ ಬೇಕಿದೆ ಎಂದ ಅವರು, 'ಹೊಸ ತಲೆಮಾರು' ಮೊಬೈಲ್, ಇಂಟರ್ನೆಟ್ ಮುಂತಾದವುಗಳಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದು, ಇದು ಸಾಮಾಜಿಕ ಸಮಸ್ಯೆಯಾಗುತ್ತಿದೆ. ಈ ನಿಟ್ಟಿನಲ್ಲಿ 'ಮೊಬೈಲ್ ಬಿಡಿ- ಪುಸ್ತಕ ಹಿಡಿ' ಮತ್ತು 'ಓದು ಕರ್ನಾಟಕ' ಎಂಬ ಕಾರ್ಯಕ್ರಮವನ್ನು ರೂಪಿಸಿದ್ದೇವೆ ಎಂದರು.

ರಸ್ತೆ ಸೇತುವೆ ಮುಂತಾದ ಮೂಲ ಸೌಕರ್ಯಗಳ ಅಭಿವೃದ್ಧಿಗೆ ಮುಖ್ಯಮಂತ್ರಿ ಮೂಲ ಸೌಕರ್ಯ ಅಭಿವೃದ್ಧಿ ಕಾರ್ಯಕ್ರಮದಡಿ 8 ಸಾವಿರ ಕೋಟಿ ರೂ. ನೀಡಲಾಗುತ್ತಿದೆ. ಕರಾವಳಿ, ಮಲೆನಾಡು ಭಾಗದಲ್ಲಿ 184 ಕಾಲುಸಂಕಗಳ ನಿರ್ಮಾಣಕ್ಕೆ 31 ಕೋಟಿ ರೂ. ವೆಚ್ಚದಲ್ಲಿ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು.

ಆರು ಲಕ್ಷ ಉದ್ಯೋಗ ಸೃಜನೆ: ಇನ್ವೆಸ್ಟ್ ಕರ್ನಾಟಕದಲ್ಲಿ 6,23,970 ಕೋಟಿ ರೂ. ಹೂಡಿಕೆ ಒಡಂಬಡಿಕೆಯಾಗಿದ್ದು, ಆರು ಲಕ್ಷಕ್ಕೂ ಹೆಚ್ಚು ಉದ್ಯೋಗ ಸೃಜನೆಯಾಗುವ ನಿರೀಕ್ಷೆಯಿದೆ. ವಿದೇಶಿ ಹೂಡಿಕೆಯಲ್ಲಿ ದೇಶದಲ್ಲೇ 2ನೇ ಸ್ಥಾನದಲ್ಲಿ ಕರ್ನಾಟಕವಿದೆ. 2024-25ನೇ ಸಾಲಿನಲ್ಲಿ 56,30,000 ಕೋಟಿ ರೂ. ವಿದೇಶಿ ಹೂಡಿಕೆ ಆಕರ್ಷಿಸಲಾಗಿತ್ತು. ಕರ್ನಾಟಕ ಬಜೆಟ್‌ನ ಶೇ.20.1ರಷ್ಟು ಅನುದಾನವನ್ನು ಮೂಲ ಸೌಕರ್ಯ ಯೋಜನೆಗಳಿಗೆ ವಿನಿಯೋಗಿಸುತ್ತಿರುವ ಪ್ರಮುಖ ರಾಜ್ಯವಾಗಿದೆ. ಗ್ಯಾರಂಟಿ ಯೋಜನೆಗಳು ಮಹಿಳೆಯರ ಸದ್ದಿಲ್ಲದ ಛಲವನ್ನು ಕಣ್ಣಿಗೆ ಕಾಣುವ ಯಶಸ್ವನ್ನಾಗಿ ಪರಿವರ್ತನೆ ಮಾಡುತ್ತಿವೆ. ರೈತನ ಮಗ ವಿಜ್ಞಾನಿಯಾಗಬೇಕು. ನೇಕಾರನ ಮಗಳು ಉದ್ಯಮಿಯಾಗಬೇಕು, ಪ್ರತಿ ಮಗುವಿಗೂ ಭವಿಷ್ಯ ತನ್ನ ಕೈಯಲ್ಲಿದೆ ಎಂಬ ವಾತಾವರಣ ನಿರ್ಮಿಸಬೇಕಿದೆ ಎಂದರು.

ಅನ್ನಭಾಗ್ಯ, ಶಕ್ತಿ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ, ಗ್ಯಾರಂಟಿ ಯೋಜನೆಗಳಿಗೆ ಈವರೆಗೆ 96 ಸಾವಿರ ಕೋಟಿಗೂ ಹೆಚ್ಚು ವಿನಿಯೋಗಿಸಲಾಗಿದೆ. ಶಕ್ತಿ ಯೋಜನೆಯಲ್ಲಿ 500 ಕೋಟಿ ಟ್ರಿಪ್‌ಗಳ ಮೂಲಕ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ ಎಂದು ಹೇಳಿದರು. ಕರ್ನಾಟಕವು ತಲಾ ಆದಾಯದಲ್ಲಿ ಮೊದಲ ಸ್ಥಾನದಲ್ಲಿದ್ದು, ಕಳೆದ 10 ವರ್ಷಗಳಲ್ಲಿ ಶೇ.101ರಷ್ಟು ಪ್ರಗತಿ ಸಾಧಿಸಿದೆ. 2024-25ರ ವೇಳೆಗೆ ತಲಾ ಆದಾಯವು 2,04,605 ರೂ.ಗಳಿಗೆ ತಲುಪಿದೆ ಎಂದು ಹೇಳಿದ ಅವರು, ಗ್ಯಾರಂಟಿ ಯೋಜನೆಗಳ ಜೊತೆಗೆ ಸಹಾಯಧನ, ಪ್ರೋತ್ಸಾಹಧನ, ವಿದ್ಯಾರ್ಥಿ ವೇತನ, ಸಾಮಾಜಿಕ ಯೋಜನೆಗಳಿಗೆ 1.12 ಲಕ್ಷ ಕೋಟಿ ರೂ.ಗೂ ಹೆಚ್ಚಿನ ಹಣವನ್ನು ಜನ ಕಲ್ಯಾಣಕ್ಕಾಗಿ ಖರ್ಚು ಮಾಡಲಾಗುತ್ತಿದೆ ಎಂದರು.

ಡಿಜಿಟೈಲೈಸ್ಡ್ ಆಸ್ತಿ ದಾಖಲೆ ವಿಸ್ತರಣೆ : ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ನಾಗರಿಕರಿಗೆ ಆನ್‌ಲೈನ್ ಮೂಲಕ ಇ-ಖಾತೆಯನ್ನು ಡಿಜಿಟೈಲೈಸ್ಡ್ ಆಸ್ತಿ ದಾಖಲೆಗಳನ್ನಾಗಿ ಒದಗಿಸುತ್ತಿದ್ದು, ರಾಜ್ಯದ ಉಳಿದ ಪ್ರದೇಶಗಳಿಗೂ ವಿಸ್ತರಿಸಲು ಯೋಜಿಸುತ್ತಿದ್ದೇವೆ. ಇ-ಖಾತಾ ವ್ಯವಸ್ಥೆಯೊಂದಿಗೆ 4 ಸಾವಿರ ಚ.ದ. ಅಡಿಯವರೆಗೆ ನಂಬಿಕೆ ನಕ್ಷೆ ಪರಿಕಲ್ಪನೆ ಜಾರಿಗೊಳಿಸಿದ್ದೇವೆ. ಬೆಂಗಳೂರು ಮತ್ತು ರಾಜ್ಯದ ಉಳಿದ ಕಡೆಗಳಲ್ಲಿ ಜನರಿಗೆ ಸಮಸ್ಯೆಯಾಗಿದ್ದ ಬಿ-ಖಾತಾ ಗೊಂದಲ ಬಗೆಹರಿಸಿ ಇ-ಖಾತೆ ಕೊಡುವ ಕ್ರಾಂತಿಕಾರಿ ತೀರ್ಮಾನ ಮಾಡಿ ಅನುಷ್ಠಾನ ಮಾಡುತ್ತಿದ್ದೇವೆ ಎಂದರು.

38 ವಿಧಾನಸಭಾ ಕ್ಷೇತ್ರಗಳ ಗ್ರಾಮೀಣ ಪ್ರದೇಶದ 1150 ಕಿ.ಮೀ ರಸ್ತೆಗಳನ್ನು ಕಲ್ಯಾಣ ಪಥ ಕಾರ್ಯಕ್ರಮದಡಿ ಅಭಿವೃದ್ಧಿಪಡಿಸಲಾಗುತ್ತಿದೆ. ಸಮುದ್ರ ಕೊರೆತವನ್ನು ತಗ್ಗಿಸಲು 200 ಕೋಟಿ ರೂ. ವೆಚ್ಚದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗಿದೆ. ಕರಾವಳಿ ಭಾಗದಲ್ಲಿ ಕೋಮು ಹಿಂಸೆ ನಿವಾರಿಸಲು ವಿಶೇಷ ಕಾರ್ಯಪಡೆ ರಚಿಸಲಾಗಿದೆ. ಗಾಳಿ, ಬಿಸಿಲು, ನೀರು ಬಳಸಿಕೊಂಡು ಅಗಾಧ ಪ್ರಮಾಣದ ವಿದ್ಯುತ್ ಉತ್ಪಾದಿಸುವ ರಾಜ್ಯ ಕರ್ನಾಟಕವಾಗಿದ್ದು, ಪ್ರಸ್ತುತ ಸುಮಾರು 24 ಸಾವಿರ ಮೆಗಾವ್ಯಾಟ್ ವಿದ್ಯುತ್ತನ್ನು ಉತ್ಪಾದಿಸಲಾಗುತ್ತಿದೆ ಎಂದರು.

ದುಸ್ಥಿತಿಯಲ್ಲಿದ್ದ ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಹೊಸ ತಾಲ್ಲೂಕು ಪ್ರಜಾಸೌಧಗಳನ್ನು ನಿರ್ಮಿಸುತ್ತಿದ್ದೇವೆ ಎಂದು ಅವರು ಇದೇ ವೇಳೆ ತಿಳಿಸಿದರು. ಪುನೀತ್ ರಾಜ್‌ಕುಮಾರ್ ಉದಯ ಜ್ಯೋತಿಯನ್ನು ರಾಜ್ಯಾದ್ಯಂತ ವಿಸ್ತರಿಸಲಾಗಿದೆ. ತಾಯಂದಿರ ಮರಣ ಪ್ರಮಾಣ ಶೇ.26ರಷ್ಟು ಕಡಿಮೆಯಾಗಿದೆ. ಆ್ಯಂಬುಲೆನ್ಸ ಸೇವೆಗಳನ್ನು ರಾಜ್ಯಾದ್ಯಂತ ಕೇಂದ್ರೀಯ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರದಲ್ಲಿ ನಿರ್ವಹಿಸುವಂತೆ ಮಾಡಲು ತೀರ್ಮಾನಿಸಿದ್ದೇವೆ ಎಂದು ಹೇಳಿದರು.

ಹಿಂದುಳಿದ ವರ್ಗಗಳ ಆಯೋಗದ ಮೂಲಕ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಮಾಡಲು ತೀರ್ಮಾನಿಸಲಾಗಿದೆ. ಪರಿಶಿಷ್ಟಜಾತಿಗಳಲ್ಲಿ ಒಳಮೀಸಲಾತಿ ಹಾಗೂ ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗಳ ವಿಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಎರಡು ವರ್ಷದಲ್ಲಿ ರಾಜ್ಯದ ಅಭಿವೃದ್ಧಿ ಮಾಡಿದರಿಗೆ 250ಕ್ಕೂ ಹೆಚ್ಚಿನ ಪ್ರಶಸ್ತಿ ಪುರಸ್ಕಾರಗಳು ಲಭಿಸಿವೆ ಎಂದು ತಿಳಿಸಿದರು.

ನಮಗೆ ಬೇಕಾಗಿರುವಷ್ಟು ಯೂರಿಯಾ ಗೊಬ್ಬರವನ್ನು ಒಕ್ಕೂಟ ಸರ್ಕಾರ ಪೂರೈಸದೆ ಸಮಸ್ಯೆಯಾಗಿದ್ದು, ಕೂಡಲೇ ಪರಿಹರಿಸಬೇಕೆಂದು ಒಕ್ಕೂಟ ಸರ್ಕಾರವನ್ನು ಒತ್ತಾಯಿಸುವುದಾಗಿ ಹೇಳಿದರು. ಹಿಂದಿನ ಸರ್ಕಾರ ಬಾಕಿ ಉಳಿಸಿದ್ದ 609 ಕೋಟಿ ರೂ. ಸೇರಿದಂತೆ 3,280 ಕೋಟಿ ರೂ. ಪ್ರೋತ್ಸಾಹಧನ ವನ್ನು ಹೈನುಗಾರರಿಗೆ ಪಾವತಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಅಗತ್ಯವಿರುವ ಕಡೆಗಳಲ್ಲಿ ಹೊಸದಾಗಿ ವಸತಿ ಶಾಲೆ ಹಾಗೂ ವಸತಿ ನಿಲಯಗಳನ್ನು ಸ್ಥಾಪಿಸಲಾಗುತ್ತಿದೆ. 500 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಸ್ಥಾಪಿಸುತ